## ಒಡಿಶಾ ಹೈಕೋರ್ಟ್ ನ್ಯಾಯಾಧೀಶ ಸಂಜೀಬ್ ಕುಮಾರ್ ಅಭಿಮತ

# ವ್ಯಾಜ್ಯ ಪರಿಹಾರ ಚರ್ಚೆಗೆ ಸಮ್ಮೇಳನ

■ ವಿಜಯವಾಣಿ ಸುದ್ದಿಜಾಲ ಆನೇಕಲ್

ಇತ್ತೀಚಿನ ದಿನಗಳಲ್ಲಿ ಸಮಸ್ಯೆಗಳು ಮತ್ತು ವಿವಾದ ಪರಿಹಾರದಲ್ಲಿನ ಬೆಳವಣಿಗೆ ಕುರಿತು ಚರ್ಚಿಸಲು, ಕಾನೂನು ಕ್ಷೇತ್ರದಲ್ಲಿ ಕೆಲಸ ಮಾಡುವ ಮನಸ್ಸುಗಳನ್ನು ಉತ್ತೇಜಿಸಲು ಸಮ್ಮೇಳನಗಳು ಉತ್ತಮ ವೇದಿಕೆಯಾಗಿವೆ ಎಂದು ಒಡಿಶಾ ಹೈಕೋರ್ಟ್ ನ್ಯಾಯಾಧೀಶ ಸಂಜೀಬ್ ಕುಮಾರ್ ಅಭಿಪ್ರಾಯಪಟ್ಟರು.

ಪಟ್ಟಣದ ಅಲಯನ್ಸ್ ವಿವಿಯ ಕಾನೂನು ಕಾಲೇಜಿನಲ್ಲಿ ಆಯೋಜಿಸಿದ್ದ ಪರ್ಯಾಯ ವಿವಾದ ನಿರ್ಣಯ ಭವಿಷ್ಯ ಮತ್ತು ಸವಾಲು ಕುರಿತು ಏರ್ಪಡಿಸಿದ್ದ ಅಂತಾರಾಷ್ಟ್ರೀಯ ಸಮ್ಮೇಳನಕ್ಕೆ ಚಾಲನೆ ನೀಡಿ ಮಾತನಾಡಿದರು.

ಅಲಯನ್ಸ್ ವಿಶ್ವವಿದ್ಯಾಲಯದ ಸಹಕುಲಪತಿ ಅಭಯ್ ಜಿ.ಚಬ್ಬಿ ಮಾತನಾಡಿ, ಕಾನೂನು ವಿದ್ಯಾರ್ಥಿಗಳು ಸಂಶೋಧನೆಗಳಲ್ಲಿ ತೊಡಗಿಸಿಕೊಳ್ಳುವ ಮೂಲಕ ಹೆಚ್ಚಿನ ಜ್ಞಾನ ಪಡೆದುಕೊಳ್ಳಬೇಕು. ಈ ಮೂಲಕ ವೃತ್ತಿ ಜೀವನದಲ್ಲಿ ಕಕ್ಷಿದಾರರಿಗೆ ನ್ಯಾಯ ಒದಗಿಸಲು ಅನುಕೂಲವಾಗುತ್ತದೆ. ಯಾವುದೇ ವಿವಾದಗಳನ್ನು ಮಧ್ಯಸ್ಥಿಕೆಯ ಮೂಲಕ ಶಾಂತಿಯುತ ಮತ್ತು ಶಾಶ್ವತವಾಗಿ ಪರಿಹರಿಸಿಕೊಳ್ಳಬಹುದಾಗಿದೆ ಎಂದರು.

ಸಮ್ಮೇಳನದಲ್ಲಿ 26ಸಂಸ್ಥೆಗಳಿಂದ 80 ಪ್ರಬಂಧ ಮಂಡಿಸಲಾಯಿತು. ಕಾನೂನು ಸಲಹೆಗಾರರಾದ ರೇಷ್ಮಾ ಒಗೋಹಾರ್, ಡಾ. ಪೂರ್ವಿ ಪೋಖಾರಿಯಾಲ್ ಇದ್ದರು.


ಆನೇಕಲ್

ಆನೇಕಲ್‌ನ ಅಲಯನ್ಸ್ ವಿಶ್ವವಿದ್ಯಾಲಯದ ಕಾನೂನು ಕಾಲೇಜಿನಲ್ಲಿ ಆಯೋಜಿಸಿದ್ದ ಅಂತಾರಾಷ್ಟ್ರೀಯ ಸಮ್ಮೇಳನದಲ್ಲಿ ಒಡಿಶಾ ಹೈಕೋರ್ಟ್ ನ್ಯಾಯಾಧೀಶ ಸಂಜೀಬ್ ಕುಮಾರ್, ಅಲಯನ್ಸ್ ವಿಶ್ವವಿದ್ಯಾಲಯದ ಉಪಕುಲಪತಿ ಡಾ. ಅನುಬಾ ಸಿಂಗ್, ಅಲಯನ್ಸ್ ಕಾನೂನು ಕಾಲೇಜಿನ ಡೀನ್ ಡಾ. ಕಿರಣ್ ಡೆನ್ನಿಸ್ ಗಾರ್ಡ್ನರ್ ಇದ್ದರು.